**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 881(1026)

ಸದಸ್ಯರ ಹೆಸರು : ಶ್ರೀ ಎಸ್ ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 17-03-2025

ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2006ರ ನಂತರ ನೇಮಕಾತಿ ಹೊಂದಿರುವ ಎಲ್ಲಾ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳಿಗೆ ಜಾರಿಯಾಗಿರುವ ಹೊಸ ಪಿಂಚಣಿ ಪದ್ಧತಿಯನ್ನು ರದ್ದುಗೊಳಿಸಿ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು; | 2006ರ ನಂತರ ನೇಮಕಾತಿ ಹೊಂದಿರುವ ಎಲ್ಲಾ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳಿಗೆ ಹೊಸ ಪಿಂಚಣಿ ಪದ್ಧತಿಯನ್ನು ರದ್ದುಗೊಳಿಸಿ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಸಂಬಂಧ ಪ್ರತ್ಯೇಕವಾದ ಪ್ರಸ್ತಾವನೆ ಇರುವುದಿಲ್ಲ. |
| ಆ) | ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ವೇತನ ತಾರತಮ್ಯ ಸರಿಪಡಿಸುವ ಸಂಬಂಧವಾಗಿ ಕುಮಾರನಾಯಕ ನೇತೃತ್ವದ ವರದಿಯ ಶಿಫಾರಸ್ಸಿನಂತೆ ಹಾಗೂ ಸರ್ಕಾರದ ಲಿಖಿತ ಭರವಸೆಯಂತೆ ಎರಡನೇ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡಲು ಕೈಗೊಂಡ ಕ್ರಮಗಳೇನು: ವೇತನ ಬಡ್ತಿ ಮಂಜೂರು ಮಾಡಲು ನಿಗದಿಪಡಿಸಿದ ಕಾಲಮಿತಿ ಎಷ್ಟು? | • ಪದವಿ ಪೂರ್ವ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ವಿವಿಧ ಬೇಡಿಕೆಗಳ ಕುರಿತು ಪರಿಶೀಲಿಸಿ ವರದಿ ನೀಡಲು ಸರ್ಕಾರವು ದಿನಾಂಕ:11-04-2011ರಲ್ಲಿ ಅಂದಿನ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯ ಕಾರ್ಯದರ್ಶಿಗಳು, ನಿರ್ದೇಶಕರು ಮತ್ತು ಜಂಟಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರನ್ನು ಒಳಗೊಂಡಂತೆ ಸಮಿತಿಯನ್ನು ರಚಿಸಲಾಗಿತ್ತು.<br>• ಸಮಿತಿಯ ವರದಿಯನ್ವಯ ಸರ್ಕಾರದ ಆದೇಶ ಸಂಖ್ಯೆ:ಇಡಿ 87 ಡಿಜಿಡಿ 2016 ದಿನಾಂಕ:15-04-2016 ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ಕುಮಾರನಾಯಕ ವರದಿಯನ್ವಯ ದಿನಾಂಕ:01-06-2016 ರಿಂದ ಜಾರಿಗೆ ಬರುವಂತೆ ಒಂದು ವಿಶೇಷ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡಲಾಗಿದೆ.<br>• ಎರಡನೇ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡುವ ಸಂಬಂಧ ಇಲಾಖೆಯಲ್ಲಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ಇಪಿ 119 ಡಿಜಿಡಬ್ಲೂ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು